Online Newspaper Clipping Service

ಉದಯವಾಣಿ

**Dated, Monday, 19th June– 2017** **Pg.No.04**

# ಉಚಿತ ಆರೋಗ್ಯ ತಪಾಸಣೆ

ಶ್ರೀನಿವಾಸಪುರ: ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಆರ್.ಎಲ್.ಜಾಲಪ್ಪ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರ, ಶ್ರೀ ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯ ಕೋಲಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಸಲಾಯಿತು.

ಶಿಬಿರದಲಿ 201 ಮಂದಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು. ಶಿಬಿರದಲ್ಲಿ ಜಾಲಪ್ಪ ಆಸ್ಪತ್ರೆಯ ಮೂಳೆ ತಜ್ಞರಾದ ಡಾ. ರಾಜೇಶ್, ಸ್ತ್ರೀ ರೋಗ ತಜ್ಞೆ ಡಾ. ಸ್ವಾತಿ, ಕಿವಿ ಗಂಟಲು ಮೂಗು ತಜ್ಞ ಷಫೀವುಲ್ಲಾ ಮಹಮದ್, ಶಸ್ತ್ರ ಚಿಕಿತ್ಸಕ ಡಾ. ರಾಜೇಶ್, ಬೆಂಗಳೂರು ವೈದೇಹಿ ಆಸ್ಪತ್ರೆಯ ವೈದ್ಯರು ಆರೋಗ್ಯ ತಪಾಸಣೆ ನಡೆಸಿದರು.